ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನವನ್ನು ಭೋಧಿಸಲಾದ ದಿನಾಂಕಃ 24.01.2025

ಮುಂದುವರೆದ ಪಾಟೀ ಸವಾಲು : ಪ್ರತಿವಾದಿಯ ಪರ ಶ್ರೀ. ಸಿ.ಎನ್.ಎಂ. ವಕೀಲರಿಂದ

1. ನಾನು ಮತ್ತು ನನ್ನ ಸಹೋದರರು ಬೇರೆ ಬೇರೆ ವಾಸ ಇದ್ದೇವೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ನಾವೆಲ್ಲ ಒಟ್ಟಿಗೆ ವಾಸ ಇದ್ದು, ಪ್ರತಿವಾದಿ ಮಾತ್ರವೇ ಬೇರೆ ವಾಸ ಇದ್ದಾರೆ ಎಂದು ನುಡಿಯುತ್ತಾರೆ. ಸದರಿ ದಾವೆಯನ್ನು ಯಾವ ಸರ್ವೆ ನಂಬರ್ ನಲ್ಲಿ ಎಷ್ಟು ಎಕರೆ ಆಸ್ತಿಗೆ ಸಂಬಂಧಪಟ್ಟಂತೆ ದಾವಾ ದಾಖಲಿಸಿರಿತ್ತಿರಿ ಎಂದರೆ ಸಾಕ್ಷಿಯು ತನ್ನ ತಂದೆಯ ಹೆಸರಿನಲ್ಲಿ ಇರುವ ಮತ್ತು ಪ್ರತಿವಾದಿಯ ಹೆಸರಿನಲ್ಲಿ ಇರುವ ಆಸ್ತಿಯ ಮೇಲೆ ದಾವಾ ದಾಖಲಿಸಿರುತ್ತೇವೆ ಎಂದು ನುಡಿಯುತ್ತಾರೆ. ನನ್ನ ತಂದೆಯ ಹೆಸರಿನಲ್ಲಿ ಸರ್ವೇ ನಂಬರ್ ಹಳೇ ಅತ್ತಿಗುಪ್ಪೆ ಗ್ರಾಮದ ಸರ್ವೇ ನಂಬರ್ 12/1 ರಲ್ಲಿ 12 ಗುಂಟೆ, ಸರ್ವೇ ನಂಬರ್ 9 ರಲ್ಲಿ 2 ಎಕರೆ ಇದೆ. ಈ ಜಮೀನಿನಲ್ಲಿ ಮಾತ್ರವೇ ನಾನು ಸ್ವಾಧೀನದಲ್ಲಿ ಇದ್ದೇನೆ ಎಂದರೆ ಸರಿಯಲ್ಲ. ಸದರಿ ಜಮೀನಿನಲ್ಲಿ ನಾನು ತೆಂಗಿನ ಬೆಳೆ ಬೆಳೆಯುತ್ತೇನೆ ಎಂದರೆ ಸಾಕ್ಷಿಯು ನಾನು ಸುಮ್ಮನೆ ಉಳುಮೆ ಮಾಡುತ್ತಿದ್ದು, ನನ್ನ ಹೆಸರಿನಲ್ಲಿ ಜಮೀನು ಇಲ್ಲ ಎಂದು ನುಡಿಯುತ್ತಾರೆ. ಸದರಿ ಸರ್ವೇ ನಂಬರ್ ನಲ್ಲಿ ಜಮೀನನ್ನು ನನ್ನ ಅಣ್ಣ 2 ನೇ ವಾದಿಗೆ ನನ್ನ ತಂದೆ ಬಿಟ್ಟು ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಜಮೀನಿನ ಸರ್ವೆ ನಂಬರ್ ಖಾತೆ ಬದಲಾವಣೆ ಮಾಡುವಂತೆ ಕೋರಿ ನಾನು ತಹಶೀಲ್ದಾರವರಿಗೆ ಅರ್ಜಿ ಸಲ್ಲಿಸಿದ್ದೆ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಅರ್ಜಿ ಸಲ್ಲಿಸಿದ್ದು, ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

2. ನಾನು ಮಾಡಿದ ಗೃಹ ಪ್ರವೇಶದ ದಿನಾಂಕ ನನಗೆ ಗೊತ್ತಿಲ್ಲ. ಸದರಿ ಮನೆಯನ್ನು ದಾವೆಯಲ್ಲಿ ಸೇರಿಸಿಲ್ಲ ಎಂದರೆ ಸಾಕ್ಷಿಯು ಎಲ್ಲಾ ಆಸ್ತಿಗಳನ್ನು ಸೇರಿಸಿರುತ್ತೇನೆ ಎಂದು ನುಡಿಯುತ್ತಾರೆ. ನಾನು ಯಾವುದೇ ಕೆಲಸದಲ್ಲಿ ಇಲ್ಲ ಎಂದರೆ ಸರಿ. ನಾನು ಮೂಲ ವ್ಯವಸಾಯಗಾರನಾಗಿರುತ್ತೇನೆ ಎಂದರೆ ಸರಿ. ದಾವಾ ಷಡ್ಯೂಲ್ ಆಸ್ತಿಗಳನ್ನು ಹೊರತುಪಡಿಸಿ ಬೇರೆ ಜಮೀನು ಇಲ್ಲ ಎಂದರೆ ಸರಿ. ನನ್ನ ತಂದೆಯ ಹೆಸರಿನಲ್ಲಿ ಇರುವ ಜಮೀನಿಂದ ಬಂದ ಆದಾಯದಿಂದ ನಾನು ಮನೆ ಕಟ್ಟಿರುತ್ತೇನೆ ಎಂದರೆ ಸರಿಯಲ್ಲ. ಪ್ರತಿವಾದಿಯು ದಾವಾ

ದಾಖಲಿಸುವ ಮುಂಚೆ ಪಿ.ಎಲ್.ಡಿ ಬ್ಯಾಂಕಿನಲ್ಲಿ ಸಾಲ ಪಡೆದಿದ್ದರು ಎಂದರೆ ಸಾಕ್ಷಿಯು ದಾವಾ ದಾಖಲಿಸಿದ ನಂತರ ಪಡೆದಿರುತ್ತಾರೆ ಎಂದು ನುಡಿಯುತ್ತಾರೆ. ದಾವಾ ದಾಖಲಿಸುವುದಕ್ಕಿತಂಲೂ ಮುಂಚೆ ಪ್ರತಿವಾದಿ ಸಾಲ ಪಡೆದಿದ್ದರು ಎಂದರೆ ಸರಿಯಲ್ಲ. ಪ್ರತಿವಾದಿ ಸಾಲ ಪಡೆದಿರುವ ಸಂಗತಿ ಗೊತ್ತಿದ್ದರೂ ಸಹ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ, ಸಾಕ್ಷಿಯು ಮುಂದುವರೆದು ಯಾವುದೇ ಜಮೀನಿನ ಹಂಚಿಕೆ ಆಗಿಲ್ಲ ಎಂದು ನುಡಿಯುತ್ತಾರೆ.

3. ಪಂಚಾಯತಿ ಪಾಲು ಪಟ್ಟಿ ರೀತ್ಯಾ ವಿಭಾಗ ಆಗಿದ್ದು, ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಹೆಣ್ಣು ಮಕ್ಕಳ ವಿವಾಹವನ್ನು ಮಾಡಲು ಪ್ರತಿವಾದಿಯು ಸಾಲ ಮಾಡಿ ಅದನ್ನು ತೀರಿಸಿರುತ್ತಾರೆ ಎಂದರೆ ಸುಳ್ಳು. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ತಿಳಿಸಿರುವ ಸಂಗತಿಗಳು ಸುಳ್ಳು ಎಂದರೆ ಸರಿಯಲ್ಲ. ಪಾಲುಪಟ್ಟಿಯಂತೆ ವಿಭಾಗ ಮಾಡಿಕೊಂಡಿದ್ದರೂ ಸಹ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ.

(ದೇವರಾಜು ಹೆಚ್.ಆರ್.)
ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ ಕೆ.ಆರ್.ಪೇಟೆ.